Akashvani : Bengaluru
National Bulletin In Kannada
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

15.10.2025 : 7.35am

*******

<><*<><>*><>

ಮುಖ್ಯಾಂಶಗಳು

೧. ಸಾಂಸ್ಕೃತಿಕ ಪರಂಪರೆ, ಪ್ರಜಾಪ್ರಭುತ್ವ ಮೌಲ್ಯಗಳು ಭಾರತ-ಮಂಗೋಲಿಯಾ ಸಂಬಂಧಗಳ ಅಡಿಪಾಯ - ರಾಷ್ಟ್ರಪತಿ ದ್ರೌಪದಿ ಮುರ್ಮು

೨. ಬಿಹಾರ್ ವಿಧಾನಸಭಾ ಚುನಾವಣಾ ಪ್ರಚಾರ; ಬಿಜೆಪಿ ಬೂತ್ ಮಟ್ಟದ ಕಾರ್ಯಕರ್ತರೊಂದಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ಸಂವಾದ

೩. ಬ್ರೆಜಿಲ್ ಉಪಾಧ್ಯಕ್ಷರೊಂದಿಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ನವದೆಹಲಿಯಲ್ಲಿಂದು ಮಾತುಕತೆ

೪. ರಾಜಸ್ಥಾನದ ಭೀಕರ ರಸ್ತೆ ಅಪಘಾತದಲ್ಲಿ ೨೦ ಮಂದಿ ಸಾವು; ಕೇಂದ್ರ ಸರ್ಕಾರದಿಂದ ಪರಿಹಾರ ಘೋಷಣೆ

****************

ಸಾಂಸ್ಕೃತಿಕ ಪರಂಪರೆ ಮತ್ತು ಪ್ರಜಾಪ್ರಭುತ್ವ ಮೌಲ್ಯಗಳು ಭಾರತ-ಮಂಗೋಲಿಯಾ ಸಂಬಂಧಗಳ ಅಡಿಪಾಯವಾಗಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ರಾಷ್ಟ್ರಪತಿ ಭವನದಲ್ಲಿ ನಿನ್ನೆ ಮಂಗೋಲಿಯಾ ಅಧ್ಯಕ್ಷ ಖುರೇಲ್ಸುಖ್ ಉಖ್ನಾ ಮತ್ತು ಅವರ ನಿಯೋಗವನ್ನು ಸ್ವಾಗತಿಸಿದ ರಾಷ್ಟ್ರಪತಿ, ಭಾರತ ಮತ್ತು ಮಂಗೋಲಿಯಾ, ಕೇವಲ ಕಾರ್ಯತಂತ್ರದ ಪಾಲುದಾರರು ಮಾತ್ರವಲ್ಲ, ಆಧ್ಯಾತ್ಮಿಕ ನೆರೆಹೊರೆಯವರು ಎಂದು ಹೇಳಿದರು. ಕಳೆದ ೨೫ ವರ್ಷಗಳಲ್ಲಿ ಭಾರತ, ಮಂಗೋಲಿಯಾದಲ್ಲಿ ಬೌದ್ಧ ದೇವಾಲಯಗಳ ಪುನಃಸ್ಥಾಪನೆ ಮತ್ತು ಪ್ರಾಚೀನ ಹಸ್ತಪ್ರತಿಗಳ ಮರುಮುದ್ರಣ ಸೇರಿದಂತೆ ವಿವಿಧ ಸಾಂಸ್ಕೃತಿಕ ಯೋಜನೆಗಳನ್ನು ಕೈಗೊಂಡಿದೆ ಎಂದು ಹೇಳಿದರು. ಸಾಂಸ್ಕೃತಿಕ ವಿನಿಮಯವನ್ನು ಮತ್ತಷ್ಟು ಉತ್ತೇಜಿಸಲು, ಈ

ಸಂಬಂಧಿತ  ಒಪ್ಪಂದ, ಬಲವಾದ ಅಡಿಪಾಯವನ್ನು ಒದಗಿಸುತ್ತದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ವಿಶ್ವಾಸ ವ್ಯಕ್ತಪಡಿಸಿದರು. ಮಂಗೋಲಿಯಾದೊಂದಿಗೆ ಅಭಿವೃದ್ಧಿ ಮತ್ತು ಸಾಮರ್ಥ್ಯ ವೃದ್ಧಿ ಪಾಲುದಾರಿಕೆಗೆ ಭಾರತ, ಹೆಚ್ಚಿನ ಆದ್ಯತೆಯನ್ನು ನೀಡುತ್ತದೆ ಅಲ್ಲದೇ, ಉಭಯ ದೇಶಗಳ ಸ್ನೇಹ ಮತ್ತು ಸಹಕಾರದ ಶಾಶ್ವತ ಸಂಕೇತಗಳಾಗಿ ಹೊರಹೊಮ್ಮುವ ಎಲ್ಲಾ ಯೋಜನೆಗಳನ್ನು ಸಮಯೋಚಿತವಾಗಿ ಪೂರ್ಣಗೊಳಿಸಲು ಭಾರತ ಸಂಪೂರ್ಣವಾಗಿ ಬದ್ಧವಾಗಿದೆ ಎಂದು ರಾಷ್ಟ್ರಪತಿ ನುಡಿದರು. ವಿಶ್ವಸಂಸ್ಥೆ ಸೇರಿದಂತೆ ಬಹುಪಕ್ಷೀಯ ವೇದಿಕೆಗಳಲ್ಲಿ, ಜಾಗತಿಕ ದಕ್ಷಿಣದ ಸದಸ್ಯರಾಗಿ ಎರಡೂ ದೇಶಗಳ ನಡುವಿನ ನಿಕಟ ಸಹಕಾರವನ್ನು ರಾಷ್ಟ್ರಪತಿ ಶ್ಲಾಘಿಸಿದರು. ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ವಿಸ್ತರಿಸಲು ಇದು ಸಕಾಲ ಎಂದು ಉಭಯ ನಾಯಕರು ಒಪ್ಪಿಕೊಂಡರು.  ಮಂಗೋಲಿಯಾ ಅಧ್ಯಕ್ಷರ ಗೌರವಾರ್ಥವಾಗಿ ರಾಷ್ಟ್ರಪತಿ ಅವರು, ಔತಣಕೂಟವನ್ನು ಸಹ ಆಯೋಜಿಸಿದ್ದರು.

*****************

ಪ್ರಧಾನಿ ನರೇಂದ್ರ ಮೋದಿ ಮತ್ತು ಮಂಗೋಲಿಯಾ ಅಧ್ಯಕ್ಷ ಖುರೆಲ್ಸುಖ್ ಉಖ್ನಾ ಅವರ ನಡುವಿನ ದ್ವಿಪಕ್ಷೀಯ ಮತ್ತು ನಿಯೋಗ ಮಟ್ಟದ ಮಾತುಕತೆಯ ನಂತರ ಭಾರತ ಮತ್ತು ಮಂಗೋಲಿಯಾ ನವದೆಹಲಿಯಲ್ಲಿ ನಿನ್ನೆ ಹತ್ತು ಒಪ್ಪಂದಗಳಿಗೆ ಸಹಿ ಹಾಕಿದವು. ಮಾನವೀಯ ನೆರವು, ಮಂಗೋಲಿಯಾದಲ್ಲಿ ಪಾರಂಪರಿಕ ತಾಣಗಳ ಪುನಃಸ್ಥಾಪನೆ, ವಲಸೆ, ಭೂವಿಜ್ಞಾನ ಮತ್ತು ಖನಿಜ ಸಂಪನ್ಮೂಲಗಳಲ್ಲಿ ಸಹಕಾರ, ಸಹಕಾರಿ ಸಂಸ್ಥೆಗಳ ಪ್ರಚಾರ ಮತ್ತು ಡಿಜಿಟಲ್ ಪರಿಹಾರಗಳ ಹಂಚಿಕೆಯಲ್ಲಿ ಸಹಕಾರಕ್ಕಾಗಿ ಈ ಒಪ್ಪಂದಗಳನ್ನು ಮಾಡಿಕೊಳ್ಳಲಾಗಿದೆ. ಈ ಸಂದರ್ಭದಲ್ಲಿ, ಉಭಯ ನಾಯಕರು ಜಂಟಿಯಾಗಿ ಭಾರತ ಮತ್ತು ಮಂಗೋಲಿಯಾದ ದ್ವಿಪಕ್ಷೀಯ ಸಂಬಂಧಗಳ ೭೦ ನೇ ವಾರ್ಷಿಕೋತ್ಸವವನ್ನು ಗುರುತಿಸುವ ಸ್ಮರಣಾರ್ಥ ಅಂಚೆಚೀಟಿಗಳನ್ನು ಬಿಡುಗಡೆ ಮಾಡಿದರು. ನವದೆಹಲಿಯಲ್ಲಿ ಜಂಟಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಮಂಗೋಲಿಯ ನಾಗರಿಕರಿಗೆ ಉಚಿತ ಇ-ವೀಸಾಗಳನ್ನು ಒದಗಿಸಲು ಭಾರತ ನಿರ್ಧರಿಸಿದೆ. ಮಂಗೋಲಿಯಾದಿಂದ ಭಾರತಕ್ಕೆ ಯುವ ಸಾಂಸ್ಕೃತಿಕ ರಾಯಭಾರಿಗಳ ವಾರ್ಷಿಕ ಭೇಟಿಯನ್ನು ಭಾರತ ಪ್ರಾಯೋಜಿಸಲಿದೆ ಎಂದು ಹೇಳಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ (೩೩ ಸೆಕೆಂಡ್ಸ್)

****************

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ಆಂಧ್ರಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ಈ ಸಮಯದಲ್ಲಿ ಅವರು, ನಂದ್ಯಾಲ್ ಜಿಲ್ಲೆಯ ಶ್ರೀಶೈಲಂನಲ್ಲಿರುವ, ಶ್ರೀ ಭ್ರಮರಾಂಬ ಮಲ್ಲಿಕಾರ್ಜುನ ಸ್ವಾಮಿ ವರ್ಲ ದೇವಾಲಯಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಲಿದ್ದಾರೆ. ಶ್ರೀಶೈಲಂನಲ್ಲಿರುವ ಶ್ರೀಶಿವಾಜಿ ಸ್ಪೂರ್ತಿ ಕೇಂದ್ರಕ್ಕೂ ಭೇಟಿ ನೀಡಲಿರುವ ಪ್ರಧಾನಿ, ಮಧ್ಯಾಹ್ನ ಕರ್ನೂಲ್‌ನಲ್ಲಿ ಸುಮಾರು ಒಂದು ಸಾವಿರದ ೪೩೦ ಕೋಟಿ ರೂಪಾಯಿ ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಹಾಗೂ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಈ ಯೋಜನೆಗಳು ಕೈಗಾರಿಕೆ, ವಿದ್ಯುತ್ ಪ್ರಸರಣ, ರಸ್ತೆಗಳು, ರೈಲ್ವೆಗಳು, ರಕ್ಷಣಾ ಉತ್ಪಾದನೆ ಹಾಗೂ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸೇರಿದಂತೆ ಪ್ರಮುಖ ಕ್ಷೇತ್ರಗಳಿಗೆ ಸಂಬಂಧಿಸಿದ್ದಾಗಿವೆ. ಇದು ಪ್ರಾದೇಶಿಕ ಮೂಲಸೌಕರ್ಯವನ್ನು ಹೆಚ್ಚಿಸುವ, ಕೈಗಾರಿಕೀಕರಣವನ್ನು ವೇಗಗೊಳಿಸುವ ಮತ್ತು ರಾಜ್ಯದಲ್ಲಿ ಸಮಗ್ರ ಸಾಮಾಜಿಕ-ಆರ್ಥಿಕ ಬೆಳವಣಿಗೆಯನ್ನು ಉತ್ತೇಜಿಸುವ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಈ ಸಂದರ್ಭದಲ್ಲಿ ಪ್ರಧಾನಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

****************

ಹಿರಿಯ ಬಿಜೆಪಿ ನಾಯಕ ಪ್ರಧಾನಿ ನರೇಂದ್ರ ಮೋದಿ ಇಂದು ಪಕ್ಷದ ಬೂತ್ ಮಟ್ಟದ ಕಾರ್ಯಕರ್ತರೊಂದಿಗೆ ಸಂವಾದ ನಡೆಸುವ ಮೂಲಕ ಬಿಹಾರದಲ್ಲಿ ಚುನಾವಣಾ ಪ್ರಚಾರ ಆರಂಭಿಸಲಿದ್ದಾರೆ. ಮೇರಾ ಬೂತ್ ಸಬ್ಸೆ ಮಜ್ಬೂತ್ ಅಭಿಯಾನದಡಿಯಲ್ಲಿ ಪಕ್ಷದ ಕಾರ್ಯಕರ್ತರೊಂದಿಗೆ ಪ್ರಧಾನಿ ಸಂವಾದ ನಡೆಸಲಿದ್ದಾರೆ. ಬಿಹಾರ ವಿಧಾನಸಭಾ ಚುನಾವಣೆಗೆ ಬಿಜೆಪಿ ನಿನ್ನೆ ೭೧ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಬಿಡುಗಡೆ ಮಾಡಿತು. ಮತ್ತೊಂದು ಎನ್‌ಡಿಎ ಮಿತ್ರಪಕ್ಷವಾದ ಹಿಂದೂಸ್ತಾನಿ ಅವಾಮ್ ಮೋರ್ಚಾ-ಜಾತ್ಯತೀತ ಕೂಡ ೬ ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿತು. ಮತ್ತೊಂದೆಡೆ, ವಿರೋಧ ಪಕ್ಷದಲ್ಲಿರುವ ಸಿಪಿಐ-ಎಂಎಲ್ ಲಿಬರೇಶನ್, ವಿಧಾನಸಭಾ ಚುನಾವಣೆಗೆ ೧೮ ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಈ

ನಡುವೆ ರಾಷ್ಟ್ರೀಯ ಜನತಾ ದಳ ಮತ್ತು ಕಾಂಗ್ರೆಸ್ ನಡುವೆ ಸೀಟು ಹಂಚಿಕೆಯಲ್ಲಿ ಯಾವುದೇ ಪ್ರಗತಿ ಕಂಡುಬಂದಿಲ್ಲ. ೨೪೩ ಸದಸ್ಯ ಬಲದ ಬಿಹಾರ ವಿಧಾನಸಭೆಗೆ ಮುಂದಿನ ತಿಂಗಳು ೬ ಮತ್ತು ೧೧ ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ಮತ ಎಣಿಕೆ ನವೆಂಬರ್ ೧೪ ರಂದು ಜರುಗಲಿದೆ.

*****************

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನವದೆಹಲಿಯಲ್ಲಿ ಇಂದು ಬ್ರೆಜಿಲ್ ಉಪಾಧ್ಯಕ್ಷ ಜೆರಾಲ್ಡೊ ಅಲ್ಕ್‌ಮಿನ್ ಅವರೊಂದಿಗೆ ಸಭೆ ನಡೆಸಲಿದ್ದಾರೆ. ಬ್ರೆಜಿಲ್ ರಕ್ಷಣಾ ಸಚಿವ ಜೋಸ್ ಮ್ಯೂಸಿಯೊ ಮಾಂಟೆರೊ ಫಿಲ್ಹೋ ಕೂಡ ಈ ಸಂವಾದದ ಸಮಯದಲ್ಲಿ ಉಪಸ್ಥಿತರಿರಲಿದ್ದಾರೆ. ಉಭಯ ದೇಶಗಳ ನಡುವಿನ ರಕ್ಷಣಾ ಕ್ಷೇತ್ರದ ಬಹುಮುಖಿ ಸಂಬಂಧಗಳನ್ನು ನಾಯಕರು ಪರಿಶೀಲಿಸಲಿದ್ದಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಮಿಲಿಟರಿ ಮತ್ತು ರಕ್ಷಣಾ ಕೈಗಾರಿಕಾ ಸಹಕಾರವನ್ನು ಒಳಗೊಂಡ ಪರಸ್ಪರ ಹಿತಾಸಕ್ತಿಯ ಕ್ಷೇತ್ರಗಳ ಬಗ್ಗೆಯೂ ಉಭಯ ನಾಯಕರು ವಿಚಾರ ವಿನಿಮಯ ಮಾಡಿಕೊಳ್ಳಲಿದ್ದಾರೆ.

*****************

ಪ್ರಧಾನ ಮಂತ್ರಿ ಉಜ್ವಲ ಯೋಜನೆಯಡಿ, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ರಾಜ್ಯದ ಮಹಿಳಾ ಫಲಾನುಭವಿಗಳಿಗೆ ಇಂದು ಎರಡು ಉಚಿತ ಎಲ್‌ಪಿಜಿ ಸಿಲೆಂಡರ್ಗಳನ್ನು ನೀಡಲಿದ್ದಾರೆ, ಇದು ರಾಜ್ಯಾದ್ಯಂತ ೧.೮೬ ಕೋಟಿ ಮಹಿಳೆಯರಿಗೆ ದೀಪಾವಳಿ ಹಬ್ಬದ ಉಡುಗೊರೆಯಾಗಿದೆ. ಯೋಜನೆಯಡಿ, ವರ್ಷಕ್ಕೆ ಎರಡು ಉಚಿತ ಎಲ್‌ಪಿಜಿ ಸಿಲೆಂಡರ್‌ಗಳನ್ನು ಎರಡು ಹಂತಗಳಲ್ಲಿ ವಿತರಿಸಲಾಗುವುದು, ಒಂದು ಅಕ್ಟೋಬರ್-ಡಿಸೆಂಬರ್ ಅವಧಿಯಲ್ಲಿ, ಇನ್ನೊಂದನ್ನು ೨೦೨೬ರ ಜನವರಿ-ಮಾರ್ಚ್ ವೇಳೆಗೆ ನೀಡಲಾಗುವುದು. ಮೊದಲ ಹಂತದಲ್ಲಿ, ಆಧಾರ್-ಪರಿಶೀಲಿಸಿದ ೧.೨೩ ಕೋಟಿ ಫಲಾನುಭವಿಗಳಿಗೆ ವಿತರಿಸಲಾಗುವುದು. ಇದಕ್ಕಾಗಿ ೩೪೬.೩೪ ಕೋಟಿ ರೂಪಾಯಿಗಳನ್ನು ಮುಂಗಡವಾಗಿ ನೀಡಲಾಗಿದೆ. ಈ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಉತ್ತರ ಪ್ರದೇಶ ಪ್ರಮುಖ ರಾಜ್ಯವಾಗಿದ್ದು, ೧೮.೬ ದಶಲಕ್ಷ ಕುಟುಂಬಗಳಿಗೆ ಈಗಾಗಲೇ ಸಂಪರ್ಕಗಳನ್ನು ಒದಗಿಸಲಾಗಿದೆ.

*****************

ರಾಜಸ್ಥಾನದ ಜೈಸಲ್ಮೇರ್ ಬಳಿ ನಿನ್ನೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ, ಎಸಿ ಸ್ಲೀಪರ್ ಬಸ್ ಬೆಂಕಿಗೆ ಆಹುತಿಯಾಗಿ ೨೦ ಮಂದಿ ಮೃತಪಟ್ಟು, ಹಲವರು ಗಾಯಗೊಂಡಿದ್ದಾರೆ. ಜೈಸಲ್ಮೇರ್-ಜೋಧ್‌ಪುರ ಹೆದ್ದಾರಿಯಲ್ಲಿ ಈ ಘಟನೆ ಸಂಭವಿಸಿದೆ. ವರದಿಗಳ ಪ್ರಕಾರ, ಬಸ್ಸಿನೊಳಗೆ ೧೯ ಪ್ರಯಾಣಿಕರು ಸುಟ್ಟು ಕರಕಲಾಗಿದ್ದು, ಚಿಕಿತ್ಸೆಯ ಸಮಯದಲ್ಲಿ ಒಬ್ಬರು ಸುಟ್ಟ ಗಾಯಗಳಿಂದಾಗಿ ಸಾವನ್ನಪ್ಪಿದ್ದಾರೆ. ಅಪಘಾತದ ಸಮಯದಲ್ಲಿ ಬಸ್‌ನಲ್ಲಿ ೫೦ ಕ್ಕೂ ಹೆಚ್ಚು ಜನರಿದ್ದರು. ೧೫ ಪ್ರಯಾಣಿಕರು ಗಾಯಗೊಂಡಿದ್ದು, ಅವರಲ್ಲಿ ಹಲವರು ಶೇಕಡಾ ೭೦ ರಷ್ಟು ತೀವ್ರ ಸುಟ್ಟಗಾಯಗಳಿಂದ ಬಳಲುತ್ತಿದ್ದಾರೆ. ಗಾಯಾಳುಗಳನ್ನು ಚಿಕಿತ್ಸೆಗಾಗಿ ಜೋಧ್‌ಪುರದ ಮಹಾತ್ಮ ಗಾಂಧಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಮೃತರ ಶವಗಳು ತೀವ್ರವಾಗಿ ಸುಟ್ಟುಹೋಗಿದ್ದು, ಡಿಎನ್‌ಎ ಪರೀಕ್ಷೆಯ ಮೂಲಕ ಅವರ ಗುರುತುಗಳನ್ನು ದೃಢಪಡಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಜೈಸಲ್ಮೇರ್ ಜಿಲ್ಲಾಧಿಕಾರಿ ಪ್ರತಾಪ್ ಸಿಂಗ್ ಅವರು ನಾಪತ್ತೆಯಾದ ಪ್ರಯಾಣಿಕರ ಕುಟುಂಬಗಳಿಗೆ ಜಿಲ್ಲಾಡಳಿತವನ್ನು ಸಂಪರ್ಕಿಸುವಂತೆ ಮನವಿ ಮಾಡಿದ್ದಾರೆ. ಮುಖ್ಯಮಂತ್ರಿ ಭಜನ್ ಲಾಲ್ ಶರ್ಮಾ ಸಂಜೆ ಅಪಘಾತ ಸ್ಥಳಕ್ಕೆ ಭೇಟಿ ನೀಡಿ ನಂತರ ಜೋಧ್‌ಪುರ ಆಸ್ಪತ್ರೆಯಲ್ಲಿ ಗಾಯಾಳುಗಳನ್ನು ಭೇಟಿ ಮಾಡಿ, ಎಲ್ಲಾ ಸಂತ್ರಸ್ತರಿಗೆ ಸೂಕ್ತ ವೈದ್ಯಕೀಯ ಆರೈಕೆಯನ್ನು ಖಚಿತಪಡಿಸಿಕೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ದುರಂತದ ಬಗ್ಗೆ ದುಃಖ ವ್ಯಕ್ತಪಡಿಸಿದ್ದಾರೆ. ಕೇಂದ್ರ ಸರ್ಕಾರ ಮೃತರ ಸಂಬಂಧಿಕರಿಗೆ ತಲಾ ೨ ಲಕ್ಷ ರೂಪಾಯಿ ಮತ್ತು ಗಾಯಗೊಂಡವರಿಗೆ ತಲಾ ೫೦ ಸಾವಿರ ರೂಪಾಯಿಗಳ ಪರಿಹಾರ ಘೋಷಿಸಿದೆ.

*****************

ಭಾರತ, ಅಮೆರಿಕಕ್ಕೆ ಇಂದಿನಿಂದ ಅಂತಾರಾಷ್ಟ್ರೀಯ ಅಂಚೆ ಸೇವೆಗಳನ್ನು ಪುನರಾರಂಭಿಸಲಿದೆ. ಸಂವಹನ ಸಚಿವಾಲಯ ಬಿಡುಗಡೆ ಮಾಡಿರುವ ಪ್ರಕಟಣೆಯಲ್ಲಿ, ಭಾರತೀಯ ಅಂಚೆಯು, ಅಮೆರಿಕದ ಕಸ್ಟಮ್ಸ್ ಮತ್ತು ಗಡಿ ರಕ್ಷಣೆಯ ಸಮನ್ವಯದ ನಂತರ, ವಿತರಣಾ ಸುಂಕ ಪಾವತಿಸಿದ ಪ್ರಕ್ರಿಯೆಗೆ ಅನುಸರಣಾ ಕಾರ್ಯವಿಧಾನವನ್ನು ಸ್ಥಾಪಿಸಿದೆ ಎಂದು ತಿಳಿಸಿದೆ.

**************